## ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) : ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ 5 ನೇ ಪಟ್ಟಿಯಲ್ಲಿರುವ 139 ಪ್ರಶ್ನೆಗಳ ಪೈಕಿ 85 ಪ್ರಶ್ನೆಗಳಿಗೆ ಲಿಖಿತಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದಿಡುತ್ತೇನೆ.

## ಗ್ರಾಮಂತರ ಪ್ರದೇಶದ ಜನರಿಗೆ ಸಂಪರ್ಕ ವ್ಯವಸ್ಥೆ

440 - ಶ್ರೀ ಎಸ್. ಅಂಗಾರ (ಸೂಳ್ಯ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

*ಅ) ಸೂಳ್ಯ ತಾಲ್ಲೂಕು ಕೇಂದ್ರದಿಂದ ಗ್ರಾಮಾಂತರ ಪ್ರದೇಶಗಳಿಗೆ ಹೋಗಿ ಬರಲು ಸರಿಯಾಗಿ ಸಾರಿಗೆ ವ್ಯವಸ್ಥೆ ಇಲ್ಲದೆ ಇರುವುದು ನಿಜವೆ? ಸೂಳ್ಯ ಬಸ್ಸು ನಿಲ್ದಾಣ ಹಾಗೂ ಡಿಪೋ ರಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ಹಾಗಿದ್ದಲ್ಲಿ ಯಾವಾಗ ಮಾಡಲಾಗುವುದು (ವಿವರ ನೀಡುವುದು)*

*ಆ) ಸೂಳ್ಯ ತಾಲ್ಲೂಕಿನ ಪವಿತ್ರ ಪುಣ್ಯ ಕ್ಷೇತ್ರವಾದ ಕುಕ್ಕೆ ಶ್ರೀ ಸುಬ್ರಹ್ಮಣ್ಯದಲ್ಲಿ ಸರಿಯಾದ ಬಸ್ ನಿಲ್ದಾಣವಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ನಿಲ್ದಾಣ ನಿರ್ಮಾಣಕ್ಕೆ ಕೈಗೊಳ್ಳಲಾದ ಕ್ರಮವೇನು?*

ಶ್ರೀ ಸಿ.ಆರ್. ಸಗೀರ್ ಅಹಮದ್ (ಸಾರಿಗೆ ಸಚಿವರು) :

ಅ) ಇಲ್ಲ. ಸೂಳ್ಯ ತಾಲ್ಲೂಕು ಕೇಂದ್ರದಿಂದ ಗ್ರಾಮಾಂತರ ಪ್ರದೇಶಗಳಿಗೆ ಜನರಿಗೆ ಹೋಗಿ ಬರಲು ಸಾಕಷ್ಟು ಸಾರಿಗೆ ವ್ಯವಸ್ಥೆ ಮಾಡಲಾಗಿದೆ.

ಸೂಳ್ಯದಲ್ಲಿ ಹಾಲಿ ಇರುವ ನಿಲ್ದಾಣದ ಕಟ್ಟಡದಲ್ಲಿ ಕನಿಷ್ಠ ಮೂಲಭೂತ ಸೌಕರ್ಯವನ್ನು ಒದಗಿಸಿ ಬಸ್ ನಿಲ್ದಾಣದ ಸೌಕರ್ಯವನ್ನು ಒದಗಿಸಿಕೊಡಲಾಗಿದೆ. ಡಿಪೋ ನಿರ್ಮಿಸುವ ಉದ್ದೇಶ ಇದೆ.

ಆ) ಬಂದಿದೆ.

ಈ ಕ್ಷೇತ್ರದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡುವ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಿ ಟೆಂಡರ್ ಮೂಲಕ ಕೆಲಸ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

## ಕೊಡಗು ಜಿಲ್ಲೆಯಲ್ಲಿ ಅಂಗವಿಕಲರಿಗೆ ಅರ್ಹತಾ ಧೃಢೀಕರಣ ಪತ್ರ ನೀಡುವಲ್ಲಿ ಆಗುತ್ತಿರುವ ವಿಳಂಬ

441 - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ (ಸೋಮವಾರ ಪೇಟೆ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಕೊಡಗು ಜಿಲ್ಲೆಯಲ್ಲಿರುವ ಅಂಗವಿಕಲರ ಸಂಖ್ಯೆ ಒಟ್ಟು ಎಷ್ಟು? ಅಂಗವಿಕಲರು ಅಂಥ*

ದೃಢೀಕರಣ ಪತ್ರವನ್ನು ಎಷ್ಟು ಜನರಿಗೆ ನೀಡಲಾಗಿದೆ? ಇನ್ನು ಎಷ್ಟು ಜನರಿಗೆ ದೃಡೀಕರಣ ಪತ್ರ, ನೀಡಬೇಕಾಗಿದೆ (ತಾಲ್ಲೂಕುವಾರು ವಿವರ ನೀಡುವುದು)

ಆ) ವಿಶ್ವದಾದ್ಯಂತ ದಿನಾಂಕ : 3-12-99 ರಂದು, ವಿಶ್ವ ಅಂಗವಿಕಲರ ದಿನಾಚಾರಣೆ ಆಗಿದ್ದರೂ ಇನ್ನು ನಿಜವಾದ ಫಲಾನುಭವಿಗಳನ್ನು ಗುರುತಿಸದಿರಲು ಕಾರಣವೇನು? ಯಾವಾಗ ಗುರುತಿಸಲಾಗುವುದು. ರಾಜ್ಯದಲ್ಲಿ ಎಷ್ಟು ಜನ ಅಂಗವಿಕಲರಿದ್ದಾರೆ? ವಿವರ ಒದಗಿಸುವುದು.

ಶ್ರೀಮತಿ. ಮೋಟಮ್ಮ (ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯರು) :

ಅ) ಕೊಡಗು ಜಿಲ್ಲೆಯ ಮೂರು ತಾಲ್ಲೂಕುಗಳಿಂದ ಇದುವರೆಗೆ 910 ಅರ್ಹ ಅಂಗವಿಕಲರನ್ನು ಗುರುತಿಸಲಾಗಿದ್ದು, ಮಡಿಕೇರಿ ತಾಲ್ಲೂಕಿನಿಂದ 476, ಸೋಮವಾರ ಪೇಟೆ ತಾಲ್ಲೂಕ್‌ನಿಂದ 305 ವೀರರಾಜಪೇಟೆ ತಾಲ್ಲೂಕಿನಿಂದ 129 ಫಲಾನುಭವಿಗಳಿರುತ್ತಾರೆ. ಇವರುಗಳ ಪೈಕಿ ಮಡಿಕೇರಿ ತಾಲ್ಲೂಕಿನಿಂದ 314 ಸೋಮವಾರ ಪೇಟೆ ತಾಲ್ಲೂಕಿನಿಂದ 296, ವೀರರಾಜ ಪೇಟೆ ತಾಲ್ಲೂಕಿನಿಂದ 125 ಅಂಗವಿಕಲರುಗಳಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆ. ಉಳಿದ ಅಂಗವಿಕಲರಿಗೆ ಗುರುತಿನ ಚೀಟಿ ನೀಡಲು ಕ್ರಮ ತೆಗೆದುಕೊಳ್ಳಲಾಗಿದೆ.

ಆ) ಅರ್ಹ ಫಲಾನುಭವಿಗಳು ಗುರುತಿನ ಚೀಟಿ ಪಡೆಯಲು ಅರ್ಜಿ ಜೊತೆಗೆ ಕೆಲವು ಅಗತ್ಯ ದಾಖಲೆಗಳನ್ನು ಒದಗಿಸಲು ವಿಳಂಬ ಮಾಡಿರುವುದರಿಂದ ಆಗಾಗ್ಗೆ ನಡೆಸುವ ಶಿಬಿರಗಳಲ್ಲಿ ಇವುಗಳನ್ನು ಮಾನ್ಯ ಮಾಡಲು ತೊಂದರೆ ಉಂಟಾಗಿ ಅವುಗಳನ್ನು ಪ್ರತ್ಯೇಕವಾಗಿ ಪಡೆದು ಜಿಲ್ಲಾಧಿಕಾರಿಗಳ ಸಹಿಗೆ ಸಲ್ಲಿಸುವಲ್ಲಿ ವಿಳಂಬವಾಗಿದೆ. ಆದರೂ ಎಲ್ಲಾ ಫಲನುಭವಿಗಳ ಅರ್ಜಿಯನ್ನು ಒಂದೇ ಸಲಕ್ಕೆ ಕ್ರೊಢೀಕರಿಸಿ ಜಿಲ್ಲಾಧಿಕಾರಿಗಳ ಸಹಿಗೆ ಸಲ್ಲಿಸಿ, ವಿತರಣೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು. 1999ರ ಗಣತಿಯ ಪ್ರಕಾರ ರಾಜ್ಯದಲ್ಲಿ ಒಟ್ಟು 3,55,819 ಅಂಗವಿಕಲರಿದ್ದಾರೆ.

**ಕೊಡಗು ಜಿಲ್ಲೆಯಲ್ಲಿ ವೃದ್ಧಾಪ್ಯ ವೇತನ**

442 - ಶ್ರೀ. ಅಪ್ಪಚ್ಚು ರಂಜನ್. ಎಂ.ಪಿ. (ಸೋಮವಾರಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಡಗು ಜಿಲ್ಲೆಯಲ್ಲಿ ಎಷ್ಟು ಜನರಿಗೆ ವೃದ್ಧಾಪ್ಯ ವೇತನ ಮಂಜೂರು ಮಾಡಲಾಗಿದೆ; ಮಂಜೂರು ಮಾಡುವಾಗ ಯಾವ ಮಾನದಂಡದ ಆಧಾರದ ಮೇಲೆ ಮಂಜೂರು ಮಾಡಲಾಗುತ್ತದೆ? (ತಾಲ್ಲೂಕುವಾರು ವಿವರ ಒದಗಿಸುವುದು)

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಕೊಡಗು ಜಿಲ್ಲೆಯಲ್ಲಿ ಈ ಕೆಳಗಿನಂತೆ ವೃದ್ಧಾಪ್ಯ ವೇತನ ಮಂಜೂರು ಮಾಡಲಾಗಿದೆ.